**Akashvani : Bangalore**
**Regional Bulletin In Kannada**
**30.05.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

**೧. ರಾಜ್ಯದಲ್ಲಿ ಮಳೆ ಅವಘಡ ಮತ್ತು ಪರಿಹಾರ ಕ್ರಮಗಳ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚರ್ಚೆ - ಮೂಲಭೂತ ಸೌಕರ್ಯ ಖಾತ್ರಿಪಡಿಸಲು ಅಧಿಕಾರಿಗಳಿಗೆ ಸೂಚನೆ**

**೨. ಕೈಗಾರಿಕೋದ್ಯಮಿಗಳ ಸಮಸ್ಯೆ ಬಗೆಹರಿಸಲು ಸರ್ಕಾರ ಬದ್ಧವಾಗಿದೆ - ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್**

**೩. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆಯುತ್ತಿರುವ ಘಟನೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಕೋಮು ನಿಗ್ರಹ ಕಾರ್ಯಪಡೆ ರಚನೆಗೆ ಕಾಲಾವಕಾಶ ಬೇಕು - ಗೃಹ ಸಚಿವ ಡಾ. ಜಿ. ಪರಮೇಶ್ವರ್**

**೪. ಎಚ್‌ಎಂಟಿ ಡಿನೋಟಿಫಿಕೇಷನ್ ಪ್ರಕರಣ: ಐಎಫ್‌ಎಸ್ ಅಧಿಕಾರಿಗಳ ಮೇಲೆ ಕ್ರಮಕ್ಕೆ - ಈಶ್ವರ ಖಂಡ್ರೆ ಶಿಫಾರಸು**

**<><*<><>*><>**

ರಾಜ್ಯದಲ್ಲಿ ಮಳೆಯಿಂದಾಗಿ ಆಗಿರುವ ಅವಘಡಗಳು ಹಾಗೂ ಕೈಗೊಂಡಿರುವ ಪರಿಹಾರ ಕ್ರಮಗಳ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಎಲ್ಲಾ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳೊಂದಿಗೆ ಇಂದು ಸಭೆ ನಡೆಸಿದರು. ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಳೆಯಿಂದಾದ ಅನಾಹುತಗಳ ತಪಾಸಣಾ ವರದಿ ಮತ್ತು ದಾಖಲೆ ಸಮರ್ಪಕವಾಗಿ ಸಂಗ್ರಹಿಸಬೇಕು. ಜಿಲ್ಲೆಗಳಲ್ಲಿನ ಶಾಲೆಗಳು, ಆಸ್ಪತ್ರೆ, ವಸತಿ ಶಾಲೆಗಳು, ಸರಿಯಾಗಿ ಕಾರ್ಯನಿರ್ವಹಿಸುವುದನ್ನು ಖಾತ್ರಿಪಡಿಸಲು ನಿರಂತರ ಭೇಟಿ ನೀಡಬೇಕು ಎಂದು ನಿರ್ದೇಶನ ನೀಡಿದರು. ಜಿಲ್ಲೆಯಲ್ಲಿ ಜನಸಾಮಾನ್ಯರಿಗೆ ಆರೋಗ್ಯ, ಸಾರಿಗೆ ಸಂಚಾರದಂತಹ ಮೂಲಭೂತ ಸೌಕರ್ಯಗಳು ಲಭಿಸದಿದ್ದರೆ, ಅದನ್ನು ಆಡಳಿತದ ವೈಫಲ್ಯವೆಂದೇ ಪರಿಗಣಿಸಬೇಕಾಗಿದೆ. ಕೆಲ ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಸರಿಯಾಗಿ ಕಚೇರಿಯಲ್ಲಿ ಸಾರ್ವಜನಿಕರಿಗೆ ಲಭ್ಯವಾಗದಿರುವ

ಬಗ್ಗೆ ದೂರುಗಳು ಬಂದಿವೆ. ಸಾರ್ವಜನಿಕ ಭೇಟಿಯ ಅವಧಿಯನ್ನು ಮೊದಲೇ ಪ್ರಕಟಿಸಬೇಕು. ಜನಸಾಮಾನ್ಯರ ಸಮಸ್ಯೆಗಳನ್ನು ಆಲಿಸಬೇಕು ಎಂದು ಸೂಚಿಸಿದರು. ಅತಿವೃಷ್ಟಿಯಿಂದ ಮನೆಗಳಿಗೆ ಹಾನಿಯಾದರೆ, ತಕ್ಷಣ ಪರಿಹಾರ ಒದಗಿಸಲು ಮುಂದಾಗಬೇಕು. ಭೂಕುಸಿತದಂತಹ ಪ್ರಕರಣಗಳಲ್ಲಿ ಸಾವಿನ ಸಂಭವನೀಯತೆಯನ್ನು ತಪ್ಪಿಸಲು ಜನರನ್ನು ತೆರವುಗೊಳಿಸುವುದು ಸೇರಿದಂತೆ ಹಲವು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಮಳೆಯಿಂದ ಸಂಪೂರ್ಣ ಹಾನಿಗೊಳಗಾದ ಮನೆಗಳಿಗೆ ಒಂದು ಲಕ್ಷ ೨೦ ಸಾವಿರ ರೂಪಾಯಿ ತಕ್ಷಣ ಪರಿಹಾರ ಒದಗಿಸಬೇಕು. ಜೊತೆಗೆ ಹೊಸಮನೆ ನೀಡಲು ಅಗತ್ಯ ಕ್ರಮ ಕೈಗೊಳ್ಳುವುದು ಸೇರಿದಂತೆ ಹಲವು ಸೂಚನೆ ನೀಡಿದರು. ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಎಚ್. ಕೆ. ಪಾಟೀಲ್, ಡಾ. ಜಿ. ಪರಮೇಶ್ವರ್, ಕೃಷ್ಣಬೈರೇಗೌಡ, ಪ್ರಿಯಾಂಕ್ ಖರ್ಗೆ , ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿದಂತೆ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.

**<><*<><>*><>**

ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ರಾಜ್ಯ ಹಾಗೂ ಕೇಂದ್ರ ಸರ್ಕಾರದ ಶಕ್ತಿ. ಸಮಸ್ಯೆಗಳನ್ನು ಬಗೆಹರಿಸಿ ಅಗತ್ಯ ನೆರವು ನೀಡುವುದು ಸರ್ಕಾರಗಳ ಜವಾಬ್ದಾರಿ. ಕೈಗಾರಿಕೋದ್ಯಮಿಗಳ ಸಮಸ್ಯೆ ಬಗೆಹರಿಸಲು ಸರ್ಕಾರ ಬದ್ಧವಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಅರಮನೆ ಮೈದಾನದ ತ್ರಿಪುರ ವಾಸಿನಿಯಲ್ಲಿ ಇಂದು ನಡೆದ ಇಂಡಿಯಾ ಎಂಎಸ್‌ಎಂಇ ಸಮಾವೇಶದಲ್ಲಿ ಅವರು ಭಾಗವಹಿಸಿ ಮಾತನಾಡಿದರು. ಸರ್ಕಾರಕ್ಕೆ ಸಮಸ್ಯೆಗಳ ಬಗ್ಗೆ ನಮಗೆ ಅರಿವಿದೆ. ಕೈಗಾರಿಕೆಗಳಿಗೆ ಅಗತ್ಯವಾಗಿರುವ ವಿದ್ಯುತ್ ಹಾಗೂ ನೀರಿನ ಸೌಲಭ್ಯ ಒದಗಿಸಲು ಸರ್ಕಾರ ಬದ್ಧವಾಗಿದೆ. ಪೀಣ್ಯ ಹಾಗೂ ಎಲೆಕ್ಟ್ರಾನಿಕ್ ಸಿಟಿ ಕೈಗಾರಿಕಾ ಪ್ರದೇಶಗಳು ಮೊದಲಿನಿಂದಲೂ ರಾಷ್ಟ್ರ ಮಟ್ಟದಲ್ಲಿ ವಿಶೇಷ ಸ್ಥಾನ ಪಡೆದಿವೆ. ಎಂಎಸ್‌ಎಂಇಗಳು ಸರ್ಕಾರ ಮಾಡಲಾಗದ ಕೆಲಸವನ್ನು ಮಾಡಿ ಜನರಿಗೆ ಉದ್ಯೋಗ ನೀಡುತ್ತಿವೆ. ಆಮೂಲಕ ನಿಮ್ಮ ಬದುಕಿನ ಜತೆಗೆ ಕೋಟ್ಯಂತರ ಕುಟುಂಬಗಳಿಗೆ ಆಧಾರವಾಗಿವೆ. ಈ ನಿಟ್ಟಿನಲ್ಲಿ ಅಗತ್ಯ ನೆರವು ನೀಡುವುದು ರಾಜ್ಯ ಹಾಗೂ ಕೇಂದ್ರ ಸರ್ಕಾರದ ಜವಾಬ್ದಾರಿ ಎಂದು ಉಪಮುಖ್ಯಮಂತ್ರಿ ತಿಳಿಸಿದರು.

**<><*<><>*><>**

ಕೋಮುಗಲಭೆಗಳಿಂದ ಕರಾವಳಿ ಭಾಗದಲ್ಲಿ ಆರ್ಥಿಕ ಹಿಂಜರಿತ ಉಂಟಾಗುತ್ತಿದ್ದು, ಇದರಿಂದ ನಷ್ಟವಾಗುತ್ತಿರುವುದು ದಕ್ಷಿಣ ಕನ್ನಡ ಜಿಲ್ಲೆ ಹಾಗೂ ಕರ್ನಾಟಕ ರಾಜ್ಯಕ್ಕೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಬೆಂಗಳೂರಿನಲ್ಲಿ ಸುದ್ದಿಗಾರರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, ಬಂಡವಾಳ ಹೂಡಿಕೆದಾರರು ಅಲ್ಲಿ ಹೂಡಿಕೆ ಮಾಡಲು

ಹಿಂಜರಿಯುತ್ತಿರುವುದನ್ನು ಎಲ್ಲರೂ ಅರಿತುಕೊಳ್ಳಬೇಕು ಎಂದು ತಿಳಿಸಿದರು. ಬೆಂಗಳೂರಿನಲ್ಲಿಂದು ಸುದ್ದಿಗಾರರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರುಕರಾವಳಿ ಭಾಗದಲ್ಲಿ ಶಾಂತಿ ನೆಲೆಸಬೇಕು. ಇದು ಒಂದು ಸಾವು, ಎರಡು ಸಾವಿನ ವಿಚಾರ ಮಾತ್ರವಲ್ಲ. ಇದು ಇಡೀ ಕರಾವಳಿ ಭಾಗಕ್ಕೆ ಬಿದ್ದಿರುವ ಕೊಡಲಿಪೆಟ್ಟು. ಜನರು ಆಂತಕಕ್ಕೆ ಒಳಗಾಗುವುದು, ಬಂಡವಾಳ ಹೂಡಿಕೆದಾರರು ಅಲ್ಲಿ ಹೂಡಿಕೆ ಮಾಡಲು ಹಿಂಜರಿಯುತ್ತಿರುವುದನ್ನು ಎಲ್ಲರೂ ಅರಿತುಕೊಳ್ಳಬೇಕು ಎಂದು ಎಲ್ಲಾ ಸಂಘಟನೆಗಳಿಗೆ ಮನವಿ ಮಾಡುವುದಾಗಿ ಅವರು ತಿಳಿಸಿದರು.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆಯುತ್ತಿರುವ ಘಟನೆಗಳನ್ನು ಸರ್ಕಾರ ಬಹಳ ಗಂಭೀರವಾಗಿ ಪರಿಗಣಿಸಿದ್ದು, ಜನರ ಆಪೇಕ್ಷೆ ಮೇರೆಗೆ ಪೊಲೀಸ್ ಅಧಿಕಾರಿಗಳನ್ನು ವರ್ಗಾಯಿಸಲಾಗಿದೆ. ಅಧಿಕಾರಿಗಳನ್ನು ಅನಿವಾರ್ಯವಾಗಿ ಬದಲಾಯಿಸಬೇಕಾದ ಪರಿಸ್ಥಿತಿ ಬಂದಿದ್ದು, ಮಂಗಳೂರು ಪೊಲೀಸ್ ಕಮಿಷನರ್, ದಕ್ಷಿಣ ಕನ್ನಡ ಎಸ್‌ಪಿ, ಉಡುಪಿ ಎಸ್‌ಪಿಯನ್ನು ಬದಲಾಯಿಸಲಾಗಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದರು. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಡೆಯುತ್ತಿರುವ ಘಟನೆಗಳನ್ನು ಸರ್ಕಾರ ಬಹಳ ಗಂಭೀರವಾಗಿ ಪರಿಗಣಿಸಿದ್ದು, ಆ ಭಾಗದಲ್ಲಿ ಶಾಂತಿ ನೆಲೆಸಬೇಕು. ದಕ್ಷಿಣ ಕನ್ನಡ ಜಿಲ್ಲೆ ಆರ್ಥಿಕವಾಗಿ, ಶೈಕ್ಷಣಿಕವಾಗಿ ಮಾದರಿಯಾಗಿರುವ ಜಿಲ್ಲೆ. ಶಾಂತಿ ಕದಡುವವರ ಮೇಲೆ ಸೂಕ್ತ ಕಾನೂನುಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಸಿದರು. ಕೋಮು ಹಿಂಸೆ ನಿಗ್ರಹ ಕಾರ್ಯಪಡೆ ರಚನೆಗೆ ಕಾಲಾವಕಾಶ ಬೇಕಾಗಿದ್ದು, ಈಗಾಗಲೇ ಪೊಲೀಸ್ ಮಹಾನಿರ್ದೇಶಕರೊಂದಿಗೆ ಕಾರ್ಯಪಡೆಯನ್ನು ಯಾವ ರೀತಿ ನಿಯೋಜಿಸಬೇಕು. ಅವರಿಗೆ ನೀಡಬೇಕಾದ ಅಧಿಕಾರದ ಬಗ್ಗೆ ಚರ್ಚಿಸಲಾಗಿದ್ದು, ಉಡುಪಿ, ಮಂಗಳೂರು ಮತ್ತು ಶಿವಮೊಗ್ಗದಲ್ಲಿ ಈ ಕಾರ್ಯಪಡೆಗಳನ್ನು ನಿಯೋಜಿಸಲಾಗುವು ಎಂದು ಅವರು ತಿಳಿಸಿದರು.

<><*<><>*><>

ಹದಿನಾಲ್ಕು ಸಾವಿರ ಕೋಟಿ ರೂ.ಗೂ ಹೆಚ್ಚು ಮೌಲ್ಯದ ಎಚ್‌ಎಂಟಿ ಅರಣ್ಯಭೂಮಿಯ ಡಿನೋಟಿಫಿಕೇಷನ್ ಅನುಮತಿ ಕೋರಿ ಸುಪ್ರೀಂಕೋರ್ಟ್ ಗೆ ಐಎ ಹಾಕಿರುವ ಪ್ರಕರಣದಲ್ಲಿ ನಿವೃತ್ತ ಐ.ಎ.ಎಸ್, ಐಎಫ್.ಎಸ್ ಮತ್ತು ಇಬ್ಬರು ಹಾಲಿ ಐ.ಎಫ್.ಎಸ್. ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಶಿಫಾರಸು ಮಾಡಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ತಮ್ಮನ್ನು ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಚ್.ಎಂ.ಟಿ. ವಶದಲ್ಲಿರುವ ಭೂಮಿ ಅರಣ್ಯೇತರ ಉದ್ದೇಶಕ್ಕೆ ಪರಿವರ್ತನೆ ಆಗಿಲ್ಲ. ಹೀಗಾಗಿ ಸುಪ್ರೀಂಕೋರ್ಟ್ ನೀಡಿರುವ ಹಲವು ತೀರ್ಪು ಮತ್ತು ಅರಣ್ಯ ಸಂರಕ್ಷಣಾ ಕಾಯಿದೆ

೧೯೮೦ರ ಪ್ರಕಾರ ಇಂದಿಗೂ ಇದು ಅರಣ್ಯವೇ ಆಗಿರುತ್ತದೆ. ಆದಾಗ್ಯೂ ಈ ಭೂಮಿ ಪರಭಾರೆ ಆಗಿದೆ, ಇದಕ್ಕೆ ಹೇಗೆ ಅವಕಾಶ ನೀಡಲಾಗಿದೆ ಎಂಬುದೇ ಪ್ರಶ್ನಾರ್ಥಕವಾಗಿದೆ ಎಂದರು. ಈ ವಿಷಯ ತಮ್ಮ ಗಮನಕ್ಕೆ ಬಂದ ಕೂಡಲೇ ಐಎ ಹಿಂಪಡೆಯಲು ಸುಪ್ರೀಂಕೋರ್ಟ್ ನಲ್ಲಿ ಅರ್ಜಿ ಸಲ್ಲಿಸಲಾಗಿದೆ. ಎಚ್.ಎಂ.ಟಿ. ವಶದಲ್ಲಿರುವ ಅರಣ್ಯ ಭೂಮಿಯಲ್ಲಿ ಉತ್ತರ ಬೆಂಗಳೂರಿನಲ್ಲಿ ಮತ್ತೊಂದು ಬೃಹತ್ ಉದ್ಯಾನ ನಿರ್ಮಾಣ ಮಾಡುವುದು ಸರ್ಕಾರದ ಉದ್ದೇಶವಾಗಿದೆ. ಮುಂದಿನ ಪೀಳಿಗೆಗೆ ಶ್ವಾಸತಾಣ ಉಳಿಸುವುದು ತಮ್ಮ ಗುರಿಯಾಗಿದೆ. ಈ ಅಂಶವನ್ನು ಐಎ ಹಿಂಪಡೆಯಲು ಸುಪ್ರೀಂಕೋರ್ಟ್‌ಗೆ ಅರ್ಜಿ ಹಾಕುವ ಪೂರ್ವದಲ್ಲೇ ತಾವು ಸ್ಪಷ್ಟಪಡಿಸಿರುವುದಾಗಿ ಈಶ್ವರ ಖಂಡ್ರೆ ಹೇಳಿದರು.

**<><*<><>*><>**

ಇದೇ ೨೫ ರಿಂದ ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಕೋವಿಡ್ ಪರೀಕ್ಷೆ ಆರಂಭಿಸಲಾಗಿದ್ದು, ಈವರೆಗೆ ಕೋವಿಡ್‌ನ ಯಾವುದೇ ಪ್ರಕರಣಗಳು ಪತ್ತೆಯಾಗಿಲ್ಲ. ಸಾರ್ವಜನಿಕರು ಭಯಪಡುವ ಅಗತ್ಯವಿಲ್ಲ, ಧೈರ್ಯವಾಗಿ ಮತ್ತು ಎಚ್ಚರಿಕೆಯಿಂದ ಇರಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್.ಎಸ್.ಮಹೇಶ್ ಕುಮಾರ್ ತಿಳಿಸಿದ್ದಾರೆ. ಕೋವಿಡ್ ನಿಯಂತ್ರಣಕ್ಕೆ ಅಗತ್ಯವಿರುವ ಎಲ್ಲಾ ಸಿದ್ದತೆಗಳನ್ನು ಜಿಲ್ಲಾಡಳಿತದ ನಿರ್ದೇಶನದಂತೆ ಹಲವು ಇಲಾಖೆಗಳ ಸಮನ್ವಯದೊಂದಿಗೆ ಆರೋಗ್ಯ ಇಲಾಖೆ ಮಾಡಿಕೊಂಡಿದೆ. ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಕೋವಿಡ್ ಗಾಗಿಯೇ ಹಾಸಿಗೆಗಳನ್ನು ಮೀಸಲಿಡಲಾಗಿದೆ. ಯಾವುದೇ ಜ್ವರ,ನೆಗಡಿ, ಕೆಮ್ಮು,ಗಂಟಲು ಕೆರೆತದಂತ ಲಕ್ಷಣಗಳು ಕಂಡು ಬಂದರೆ ಕೂಡಲೇ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬೇಕು ಮತ್ತು ಕೋವಿಡ್ ತಪಾಸಣೆಗೆ ಒಳಗಾಗಬೇಕು. ಯಾವುದೇ ಭಯಪಡುವ ಅಗತ್ಯವಿಲ್ಲ. ಸಾರ್ವಜನಿಕರು ಸ್ವಯಂ ಚಿಕಿತ್ಸೆಗೆ ಮುಂದಾಗಬಾರದು ಎಂದು ಮನವಿ ಮಾಡಿದ್ದಾರೆ.

**ಧ್ವನಿ- ಡಾ.ಎಸ್.ಎಸ್.ಮಹೇಶ್**

**<><*<><>*><>**

ಮಕ್ಕಳು ದೇವರ ಸಮಾನ, ಮಕ್ಕಳ ಶಿಕ್ಷಣದಲ್ಲಿ ಮುಖ್ಯವಾಗಿ ನೀತಿ ಶಿಕ್ಷಣ, ಮೌಲ್ಯ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು. ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರವನ್ನು ಕಲಿಸಿ ಮಕ್ಕಳನ್ನು ಶ್ರೇಷ್ಠ ನಾಗರಿಕರನ್ನಾಗಿ ರೂಪಿಸುವ ಕಾರ್ಯವನ್ನು ಶಿಕ್ಷಕರು ಮಾಡಬೇಕು ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದ್ದಾರೆ.

**<><*<><>*><>**

ಪ್ರಸಾರ ಭಾರತಿಯ ಶಬ್ದ್ ಪೋರ್ಟಲ್‌ನ ಉಚಿತ ಸೇವೆಗಳಿಗೆ ನೋಂದಾಯಿಸಿಕೊಳ್ಳಲು ಯೂಟ್ಯೂಬರ್‌ಗಳು, ಪಾಡ್‌ಕ್ಯಾಸ್ಟರ್‌ಗಳು ಮತ್ತು ವೀಡಿಯೊ ಸಂಪಾದಕರನ್ನು ಆಹ್ವಾನಿಸಲಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**